**ಶ್ರೀ ಬಿ.ಎನ್. ಬಚ್ಚೇಗೌಡ (ಮಾನ್ಯ ಕಾರ್ಮಿಕ ಸಚಿವರು):–**

ಅ) 42,322

ಆ) ಇಲ್ಲ

**ಹಾಸ್ಟೆಲ್‌ಗಳನ್ನು ಹಾಗೂ ಮೊರಾರ್ಜಿ ಶಾಲೆ ಮಂಜೂರು ಮಾಡುವ ಬಗ್ಗೆ**

**6 ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ):–** ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಭದ್ರಾವತಿ ಮತ್ತು ಹೊಳೆಹೊನ್ನೂರು ಜಂಟಿ ಕ್ಷೇತ್ರವಾಗಿದ್ದು, ವಿದ್ಯಾರ್ಥಿಗಳಿಗನುಗುಣವಾಗಿ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ;

ಆ) ಭದ್ರಾವತಿ ಕ್ಷೇತ್ರವು ತುಂಬಾ ಹಿಂದುಳಿದಿದ್ದು, ರೈತರು ಮತ್ತು ಕಾರ್ಮಿಕರ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ, ಇನ್ನೂ ಒಂದು ಮೊರಾರ್ಜಿ ಶಾಲೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಭದ್ರಾವತಿ ಕ್ಷೇತ್ರದಲ್ಲಿ 4 ಲಕ್ಷ ಜನಸಂಖ್ಯೆ ಹೊಂದಿದ್ದು, ಅವುಗಳಲ್ಲಿ ಸುಮಾರು ಅರ್ಧದಷ್ಟು ಎಸ್.ಸಿ./ಎಸ್.ಟಿ. ಜನಾಂಗದವರು ವಾಸಿಸುತ್ತಿದ್ದು, ಅವರುಗಳ ಹಿತದೃಷ್ಟಿಯಿಂದ ಒಂದು ಅಂಬೇಡ್ಕರ್ ಭವನ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಭದ್ರಾವತಿ ಕ್ಷೇತ್ರದಲ್ಲಿ ಎಸ್.ಸಿ./ಎಸ್.ಟಿ. ಜನಸಂಖ್ಯೆ ಹೆಚ್ಚಾಗಿದ್ದು ಅವರುಗಳಲ್ಲಿ ಹೆಚ್ಚಾಗಿ ಹೆಣ್ಣು ಮಕ್ಕಳು ನಿರುದ್ಯೋಗ ಸಮಸ್ಯೆಯನ್ನು ಎದುರಿಸುತ್ತಿದ್ದು, ಎಸ್.ಸಿ./ಎಸ್.ಟಿ. ಕಾರ್ಪೋರೇಷನ್ ನಿಗಮದಿಂದ ಫಲಾನುಭವಿಗಳಿಗೆ ಹೆಚ್ಚಿಗೆ ಹಣ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ;

ಉ) ಈ ಕ್ಷೇತ್ರಕ್ಕೆ ಹೈನುಗಾರಿಕಾ ತರಬೇತಿ ಕೇಂದ್ರ ಮತ್ತು ಉದ್ಯೋಗ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

**ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು):–**

ಅ) ಭದ್ರಾವತಿ ಮತ್ತು ಹೊಳೆಹೊನ್ನೂರು ಜಂಟಿ ಕ್ಷೇತ್ರದಲ್ಲಿ ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ಬಾಲಕ/ಬಾಲಕಿಯರಿಗಾಗಿ ಪರಿಶಿಷ್ಟ ಜಾತಿಯ 11 ವಿದ್ಯಾರ್ಥಿ ನಿಲಯಗಳು ಹಾಲಿ ನಡೆಯುತ್ತಿವೆ. ಈ ವಿದ್ಯಾರ್ಥಿ ನಿಲಯಗಳ ಮಂಜೂರಾತಿ ಸಂಖ್ಯೆ: 650 ಆಗಿದ್ದು

2008–09ನೇ ಸಾಲಿಗೆ 524 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ. ಮಂಜೂರಾತಿ ಸಂಖ್ಯೆಗಿಂತ 126 ಅರ್ಜಿಗಳು ಕಡಿಮೆ ಬಂದಿವೆ. ಆದ್ದರಿಂದ ಸದರಿ ಕ್ಷೇತ್ರದಲ್ಲಿ ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಹೊಸ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವ ಅವಶ್ಯಕತೆ ಉದ್ಭವಿಸುವುದಿಲ್ಲ.

ಈ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ 05 ಮೆಟ್ರಿಕ್ ಪೂರ್ವ ಮತ್ತು 05 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಬೇಡಿಕೆ ಇರುತ್ತದೆ. 2008–09ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಗೆ ಹಣದ ಅವಕಾಶ ಇಲ್ಲದಿರುವುದರಿಂದ ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸಾಧ್ಯವಾಗುತ್ತಿಲ್ಲ.

ಭದ್ರಾವತಿ ಮತ್ತು ಹೊಳೆ ಹೊನ್ನೂರು ಜಂಟಿ ಕ್ಷೇತ್ರ ವ್ಯಾಪ್ತಿಯ ಭದ್ರಾವತಿ ತಾಲ್ಲೂಕು ಅಂತರಗಂಗೆ ಗ್ರಾಮದಲ್ಲಿ 75 ಸಂಖ್ಯಾಬಲದ ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಕಾರ್ಯ ನಿರ್ವಹಿಸುತ್ತಿದೆ. ಭದ್ರಾವತಿ ಮತ್ತು ಹೊಳೆ ಹೊನ್ನೂರು ಕ್ಷೇತ್ರಗಳಲ್ಲಿ ಪರಿಶಿಷ್ಟವರ್ಗದ ವಿದ್ಯಾರ್ಥಿಗಳಿಗನುಗುಣವಾಗಿ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತುತ ಯಾವುದೇ ಪ್ರಸ್ತಾವನೆಗಳು ಇರುವುದಿಲ್ಲ.

ಆ) ಭದ್ರಾವತಿ ವಿಧಾನ ಸಭಾ ಕ್ಷೇತ್ರದಲ್ಲಿ ಎರಡು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮಂಜೂರಾಗಿದ್ದು, ಹಂಚಿನ ಸಿದ್ದಾಪುರ ಗ್ರಾಮದಲ್ಲಿ (ಪರಿಶಿಷ್ಟ ಜಾತಿ) ಹಾಗೂ ಅನವೇರಿ ಗ್ರಾಮದಲ್ಲಿ (ಹಿಂದುಳಿದ ವರ್ಗ) ಕಾರ್ಯನಿರ್ವಹಿಸುತ್ತಿವೆ. ಹೆಚ್ಚಿನ ಹೊಸ ವಸತಿ ಶಾಲೆಯ ಬೇಡಿಕೆ ಪರಿಶೀಲಿಸಲಾಗುವುದು.

ಇ) ಈಗಾಗಲೇ ಭದ್ರಾವತಿ ಮತಕ್ಷೇತ್ರಕ್ಕೆ ಕೆಳಕಂಡ 03 ಅಂಬೇಡ್ಕರ್ ಭವನಗಳು ಮಂಜೂರಾಗಿರುತ್ತವೆ.

1) ಭದ್ರಾವತಿ ತಾಲ್ಲೂಕಿನ ಹುತ್ತಾ ಕಾಲೋನಿ

2) ಭದ್ರಾವತಿ ತಾಲ್ಲೂಕಿನ ಕೂಡ್ಲಿಗೆರೆ ಗ್ರಾಮ

3) ಭದ್ರಾವತಿ ತಾಲ್ಲೂಕು ಕಾರೇಹಳ್ಳಿ ಗ್ರಾಮ ಪಂಚಾಯತಿಯ ಕಾಳಿಂಗನ ಹಳ್ಳಿ

ಈ) ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಪರಿಶಿಷ್ಟ ಜಾತಿಗಳ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಯೋಜನೆ, ಐ.ಎಸ್.ಬಿ. ಯೋಜನೆ,

ನೇರ ಸಾಲ ಯೋಜನೆ, ತರಬೇತಿ ಕಾರ್ಯಕ್ರಮ, ಮೈಕ್ರೋ ಕ್ರೆಡಿಟ್, ಮೈಕ್ರೋ ಫೈನಾನ್ಸ್, ಮಹಿಳಾ ಕಿಸಾನ್ ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಸಫಾಯಿ ಕರ್ಮಕಾರಿ ಪುನರ್ವಸತಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಪರಿಶಿಷ್ಟ ವರ್ಗದವರ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ತರಬೇತಿ ಯೋಜನೆ, ಭೂ ಒಡೆತನ ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಯಂತಹ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲ್ಕಂಡ ಯೋಜನೆಗಳಡಿ ಭೂ ಒಡೆತನ ಯೋಜನೆ ಮತ್ತು ಮಹಿಳಾ ಕಿಸಾನ್ ಯೋಜನೆಯು ಮಹಿಳೆಯರಿಗೆ ಮೀಸಲಿಟ್ಟಿರುವ ಯೋಜನೆಯಾಗಿರುತ್ತದೆ. ಇನ್ನುಳಿದ ಇತರೆ ಯೋಜನೆಗಳಲ್ಲಿ ಶೇ.33ರಷ್ಟು ಮಹಿಳೆಯರಿಗೆ ಮೀಸಲಿಡಲಾಗಿದೆ. ನಿರುದ್ಯೋಗಿ ಯುವಕ ಯುವತಿಯರು ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಯಂ ಉದ್ಯೋಗ ಯೋಜನೆ ಅಡಿ ಸೌಲಭ್ಯ ಒದಗಿಸಲಾಗಿದೆ.

ಸರ್ಕಾರದ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಿದ ಅನುದಾನದ ರೀತ್ಯಾ ಪ್ರತಿಯೊಂದು ಜಿಲ್ಲೆ ಮತ್ತು ವಿಧಾನಸಭಾ ಕ್ಷೇತ್ರಗಳಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಆಧಾರದ ಮೇಲೆ ಗುರಿಯನ್ನು ನಿಗಧಿಪಡಿಸಿ ಮೇಲ್ಕಂಡ ಯೋಜನೆಯಡಿ ನೆರವು ಕಲ್ಪಿಸಲಾಗುತ್ತಿದೆ.

ಉ) ಸರ್ಕಾರ ಮತ್ತು ಕರ್ನಾಟಕ ಹಾಲು ಮಹಾಮಂಡಳಿವತಿಯಿಂದ ಭದ್ರಾವತಿ ಕ್ಷೇತ್ರದಲ್ಲಿ ಹೈನುಗಾರಿಕೆ ತರಬೇತಿ ಕೇಂದ್ರ ಸ್ಥಾಪಿಸುವ ಯೋಜನೆ ಇರುವುದಿಲ್ಲ.

**ಹಾಸ್ಟೆಲ್‌ಗಳನ್ನು ಹಾಗೂ ಮುರಾರ್ಜಿ ಶಾಲೆ ಮಂಜೂರು ಮಾಡುವ ಬಗ್ಗೆ**

**6. ಶ್ರೀ ಸಂಗಮೇಶ್ವರ ಬಿ.ಕೆ.(ಭದ್ರಾವತಿ):–** ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಭದ್ರಾವತಿ ಮತ್ತು ಹೊಳೆಹೊನ್ನೂರು ಜಂಟಿ ಕ್ಷೇತ್ರವಾಗಿದ್ದು, ವಿದ್ಯಾರ್ಥಿಗಳಿಗನುಗುಣವಾಗಿ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ;

ಆ) ಭದ್ರಾವತಿ ಕ್ಷೇತ್ರವು ತುಂಬಾ ಹಿಂದುಳಿದಿದ್ದು, ರೈತರು ಮತ್ತು ಕಾರ್ಮಿಕರ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ, ಇನ್ನೂ ಒಂದು ಮೊರಾರ್ಜಿ ಶಾಲೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಭದ್ರಾವತಿ ಕ್ಷೇತ್ರದಲ್ಲಿ 4 ಲಕ್ಷ ಜನಸಂಖ್ಯೆ ಹೊಂದಿದ್ದು, ಅವುಗಳಲ್ಲಿ ಸುಮಾರು ಅರ್ಧದಷ್ಟು ಎಸ್.ಸಿ./ಎಸ್.ಟಿ. ಜನಾಂಗದವರು ವಾಸಿಸುತ್ತಿದ್ದು, ಅವರುಗಳ ಹಿತದೃಷ್ಟಿಯಿಂದ ಒಂದು ಅಂಬೇಡ್ಕರ್ ಭವನ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಭದ್ರಾವತಿ ಕ್ಷೇತ್ರದಲ್ಲಿ ಎಸ್.ಸಿ./ಎಸ್.ಟಿ. ಜನಸಂಖ್ಯೆ ಹೆಚ್ಚಾಗಿದ್ದು ಅವರುಗಳಲ್ಲಿ ಹೆಚ್ಚಾಗಿ ಹೆಣ್ಣು ಮಕ್ಕಳು ನಿರುದ್ಯೋಗ ಸಮಸ್ಯೆಯನ್ನು ಎದುರಿಸುತ್ತಿದ್ದು, ಎಸ್.ಸಿ./ಎಸ್.ಟಿ. ಕಾರ್ಪೋರೇಷನ್ ನಿಗಮದಿಂದ ಫಲಾನುಭವಿಗಳಿಗೆ ಹೆಚ್ಚಿಗೆ ಹಣ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ;

ಉ) ಈ ಕ್ಷೇತ್ರಕ್ಕೆ ಹೈನುಗಾರಿಕಾ ತರಬೇತಿ ಕೇಂದ್ರ ಮತ್ತು ಉದ್ಯೋಗ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

**ಮಾನ್ಯ ಶ್ರೀ ಡಿ. ಸುಧಾಕರ, ಸಮಾಜ ಕಲ್ಯಾಣ ಸಚಿವರು:-**

ಅ) ಭದ್ರಾವತಿ ಮತ್ತು ಹೊಳೆಹೊನ್ನೂರು ಜಂಟಿ ಕ್ಷೇತ್ರದಲ್ಲಿ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ಬಾಲಕ/ಬಾಲಕಿಯರಿಗಾಗಿ ಪರಿಶಿಷ್ಟ ಜಾತಿಯ 11 ವಿದ್ಯಾರ್ಥಿ ನಿಲಯಗಳು ಹಾಲಿ ನಡೆಯುತ್ತಿವೆ. ಈ ವಿದ್ಯಾರ್ಥಿ ನಿಲಯಗಳ ಮಂಜೂರಾತಿ ಸಂಖ್ಯೆ:650 ಆಗಿದ್ದು 2008-09ನೇ ಸಾಲಿಗೆ 524 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ. ಮಂಜೂರಾತಿ ಸಂಖ್ಯೆಗಿಂತ 126 ಅರ್ಜಿಗಳು ಕಡಿಮೆ ಬಂದಿವೆ. ಆದ್ದರಿಂದ ಸದರಿ ಕ್ಷೇತ್ರದಲ್ಲಿ ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಹೊಸ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವ ಅವಶ್ಯಕತೆ ಉದ್ಭವಿಸುವುದಿಲ್ಲ.

ಈ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ 05 ಮೆಟ್ರಿಕ್ ಪೂರ್ವ ಮತ್ತು 05 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಬೇಡಿಕೆ ಇರುತ್ತದೆ. 2008-09ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಗೆ ಹಣದ ಅವಕಾಶ ಇಲ್ಲದಿರುವುದರಿಂದ ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲು ಸಾಧ್ಯವಾಗುತ್ತಿಲ್ಲ.

ಭದ್ರಾವತಿ ಮತ್ತು ಹೊಳೆ ಹೊನ್ನೂರು ಜಂಟಿ ಕ್ಷೇತ್ರ ವ್ಯಾಪ್ತಿಯ ಭದ್ರಾವತಿ ತಾಲ್ಲೂಕು ಅಂತರಗಂಗೆ ಗ್ರಾಮದಲ್ಲಿ 75 ಸಂಖ್ಯಾಬಲದ ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಕಾರ್ಯ ನಿರ್ವಹಿಸುತ್ತಿದೆ. ಭದ್ರಾವತಿ ಮತ್ತು ಹೊಳೆ ಹೊನ್ನೂರು ಕ್ಷೇತ್ರಗಳಲ್ಲಿ ಪರಿಶಿಷ್ಟವರ್ಗದ ವಿದ್ಯಾರ್ಥಿಗಳಿಗನುಗುಣವಾಗಿ ಬಾಲಕ ಮತ್ತು ಬಾಲಕಿಯರ

ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತುತ ಯಾವುದೇ ಪ್ರಸ್ತಾವನೆಗಳು ಇರುವುದಿಲ್ಲ.

(ಆ) ಭದ್ರಾವತಿ ವಿಧಾನ ಸಭಾ ಕ್ಷೇತ್ರದಲ್ಲಿ ಎರಡು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮಂಜೂರಾಗಿದ್ದು, ಹಂಚಿನ ಸಿದ್ದಾಪುರ ಗ್ರಾಮದಲ್ಲಿ (ಪರಿಶಿಷ್ಟ ಜಾತಿ) ಹಾಗೂ ಅನವೇರಿ ಗ್ರಾಮದಲ್ಲಿ (ಹಿಂದುಳಿದ ವರ್ಗ) ಕಾರ್ಯನಿರ್ವಹಿಸುತ್ತಿವೆ. ಹೆಚ್ಚಿನ ಹೊಸ ವಸತಿ ಶಾಲೆಯ ಬೇಡಿಕೆ ಬಗ್ಗೆ ಪರಿಶೀಲಿಸಲಾಗುವುದು.

(ಇ) ಈಗಾಗಲೇ ಭದ್ರಾವತಿ ಮತಕ್ಷೇತ್ರಕ್ಕೆ ಕೆಳಕಂಡ 03 ಅಂಬೇಡ್ಕರ್ ಭವನಗಳು ಮಂಜೂರಾಗಿರುತ್ತವೆ.

1) ಭದ್ರಾವತಿ ತಾಲ್ಲೂಕಿನ ಹುತ್ತಾ ಕಾಲೋನಿ

2) ಭದ್ರಾವತಿ ತಾಲ್ಲೂಕಿನ ಕೂಡ್ಲಿಗೆರೆ ಗ್ರಾಮ

3) ಭದ್ರಾವತಿ ತಾಲ್ಲೂಕು ಕಾರೇಹಳ್ಳಿ ಗ್ರಾಮ ಪಂಚಾಯತಿಯ ಕಾಳಿಂಗನ ಹಳ್ಳಿ

(ಈ) ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಪರಿಶಿಷ್ಟ ಜಾತಿಗಳ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಯೋಜನೆ, ಐ.ಎಸ್.ಬಿ. ಯೋಜನೆ, ನೇರ ಸಾಲ ಯೋಜನೆ, ತರಬೇತಿ ಕಾರ್ಯಕ್ರಮ, ಮೈಕ್ರೋ ಕ್ರೆಡಿಟ್, ಮೈಕ್ರೋ ಫೈನಾನ್ಸ್, ಮಹಿಳಾ ಕಿಸಾನ್ ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಸಫಾಯಿ ಕರ್ಮಕಾರಿ ಪುನರ್ವಸತಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಪರಿಶಿಷ್ಟ ವರ್ಗದವರ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ತರಬೇತಿ ಯೋಜನೆ, ಭೂ ಒಡೆತನ ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಯಂತಹ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲ್ಕಂಡ ಯೋಜನೆಗಳಡಿ ಭೂ ಒಡೆತನ ಯೋಜನೆ ಮತ್ತು ಮಹಿಳಾ ಕಿಸಾನ್ ಯೋಜನೆಯು ಮಹಿಳೆಯರಿಗೆ ಮೀಸಲಿಟ್ಟಿರುವ ಯೋಜನೆಯಾಗಿರುತ್ತದೆ. ಇನ್ನುಳಿದ ಇತರೆ ಯೋಜನೆಗಳಲ್ಲಿ ಶೇ.33ರಷ್ಟು ಮಹಿಳೆಯರಿಗೆ ಮೀಸಲಿಡಲಾಗಿದೆ. ನಿರುದ್ಯೋಗ ಯುವಕ ಯುವತಿಯರು ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಯಂ ಉದ್ಯೋಗ ಯೋಜನೆ ಅತ್ಯ ಸೌಲಭ್ಯ ಒದಗಿಸಲಾಗಿದೆ.

ಸರ್ಕಾರದ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಿದ ಅನುದಾನದ ರೀತ್ಯಾ ಪ್ರತಿಯೊಂದು ಜಿಲ್ಲೆ ಮತ್ತು ವಿಧಾನಸಭಾ ಕ್ಷೇತ್ರಗಳಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಆಧಾರದ ಮೇಲೆ ಗುರಿಯನ್ನು ನಿಗಧಿಪಡಿಸಿ ಮೇಲ್ಕಂಡ ಯೋಜನೆಯಡಿ ನೆರವು ಕಲ್ಪಿಸಲಾಗಿದೆ.

ಊ) ಸರ್ಕಾರ ಮತ್ತು ಕರ್ನಾಟಕ ಹಾಲು ಮಹಾಮಂಡಳಿ ವತಿಯಿಂದ ಭದ್ರಾವತಿ ಕ್ಷೇತ್ರದಲ್ಲಿ ಹೈನುಗಾರಿಕೆ ತರಬೇತಿ ಕೇಂದ್ರ ಸ್ಥಾಪಿಸುವ ಯೋಜನೆ ಇರುವುದಿಲ್ಲ.

7. **ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ)** :– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭದ್ರಾವತಿ ಕ್ಷೇತ್ರದಲ್ಲಿರುವ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ, ಈ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಇ) ಭದ್ರಾವತಿ ಕ್ಷೇತ್ರದ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ ಹಾಗೂ ಸಿಬ್ಬಂದಿಗಳು ಸರಿಯಾಗಿ ಕೆಲಸ ನಿರ್ವಹಿಸದಿರುವವರ ಬಗ್ಗೆ ಕೈಗೊಂಡಿರುವ ಕ್ರಮವೇನು ? ಹಾಗಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗಿದೆ, ವಿವರಿಸಿ.

ಈ) ಭದ್ರಾವತಿ ಕ್ಷೇತ್ರದಲ್ಲಿ ಹೆಚ್ಚಿನ ಜನಸಂಖ್ಯೆಯವರು ಹಿಂದುಳಿದ ಪಂಗಡದವರು ಹಾಗೂ ಕಾರ್ಮಿಕರುಗಳು ಇರುವುದರಿಂದ ಸಾರ್ವಜನಿಕರಿಗೆ ಔಷಧಿಯ ಕೊರತೆಯುಂಟಾಗುತ್ತಿರುವುದರಿಂದ ಇವುಗಳನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

ಉ) ಸರ್ಕಾರಿ ಆಸ್ಪತ್ರೆಯು 100 ಹಾಸಿಗೆಯನ್ನು ಹೊಂದಿದ್ದು, ಹಾಸಿಗೆಗೆ ಬೇಕಾದ ಬೆಡ್ಡುಗಳು, ಬೆಡ್‌ಶೀಟುಗಳು ಸ್ವಚ್ಛತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಊ) ಹಾಗಿದ್ದಲ್ಲಿ, ಈ ಅವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು ?